# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1131 |
| ಸದಸ್ಯರ ಹೆಸರು | : | ಡಾ: ಚಂದ್ರಶೇಖರ ಬಿ.ಪಾಟೀಲ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 07.03.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಮುಡಬಿ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಮೂಲಭೂತ ಸೌಕರ್ಯ ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಸರ್ಕಾರಿ ಪದವಿ ಪೂರ್ವ ಕಾಲೇಜು, ಮುಡಬಿ, ಬೀದರ್ ಜಿಲ್ಲೆ ಈ ಕಾಲೇಜಿಗೆ ನಬಾರ್ಡ್ ಸಹಯೋಗದ 2018-19ನೇ ಸಾಲಿನ ಆರ್‌ಐಡಿಎಫ್-24ರ ಯೋಜನೆಯಡಿ ರೂ.55.00 ಲಕ್ಷ ಮೊತ್ತದ 02 ಹೆಚ್ಚುವರಿ ತರಗತಿ ಕೊಠಡಿ 02 ಶೌಚಾಲಯ ಬ್ಲಾಕ್ ನಿರ್ಮಾಣ ಕಾಮಗಾರಿಗೆ ಅನುಮೋದನೆ ನೀಡಿ ಅನುದಾನ ಬಿಡುಗಡೆ ಮಾಡಲಾಗಿದೆ. ಕಾಮಗಾರಿ ಮುಕ್ತಾಯಗೊಂಡಿದೆ.<br><br>ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಕೆ.ಆರ್.ಡಿ.ಬಿ)ವತಿಯಿಂದ ಸದರಿ ಕಾಲೇಜಿಗೆ ಪೀಠೋಪಕರಣಗಳನ್ನು ಒದಗಿಸಲಾಗಿದೆ.<br><br>2022-23ನೇ ಸಾಲಿಗೆ ಸಂಪೂರ್ಣ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಸಂಬಂಧ ಕ್ರಿಯಾ ಯೋಜನೆಯನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ (ಕೆ.ಕೆ.ಆರ್.ಡಿ.ಬಿ.) ಸಲ್ಲಿಸಿದ್ದು,ಅನುಮೋದನೆ ನಿರೀಕ್ಷಣೆಯಲ್ಲಿದೆ.<br><br>ಮುಂದುವರೆದು ರಾಜ್ಯವಲಯ ಯೋಜನೆಯಡಿ ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಹಂತಹಂತವಾಗಿ ಆದ್ಯತೆ ಅನುಸಾರ ರಾಜ್ಯದಾದ್ಯಂತ ಶಾಲಾ-ಕಾಲೇಜುಗಳ ಕಟ್ಟಡ ನಿರ್ಮಾಣ/ದುರಸ್ಥಿ ಕಾರ್ಯಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |

**ಇಪಿ: 76 ಯೋಸಕ 2022**

(ಬಿ.ಸಿ.ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು